# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 1009 |
| ಉತ್ತರಿಸಬೇಕಾದ ದಿನಾಂಕ | : 12.03.2026 |
| ಸದಸ್ಯರ ಹೆಸರು | : ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : ಮಾನ್ಯ ಮುಖ್ಯಮಂತ್ರಿಯವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಯಾದಗಿರಿಯಲ್ಲಿರುವ ಜಿಲ್ಲಾ ಕ್ರೀಡಾಂಗಣದಲ್ಲಿ ಕನಿಷ್ಠ ಮೂಲ ಸೌಲಭ್ಯಗಳಿಗೂ ಆಟಗಾರರು ಪರದಾಡುವ ಸ್ಥಿತಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಸದರಿ ಕ್ರೀಡಾಂಗಣದ ಅಭಿವೃದ್ಧಿಗಾಗಿ ಇದುವರೆವಿಗೂ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು; | ಯಾದಗಿರಿ ಜಿಲ್ಲಾ ಕ್ರೀಡಾಂಗಣ 40.39 ಎಕರೆ ನಿವೇಶನ ಹೊಂದಿದ್ದು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಹೆಸರಿನಲ್ಲಿದೆ. ಸದರಿ ಕ್ರೀಡಾಂಗಣವನ್ನು ಅಭಿವೃದ್ಧಿಪಡಿಸಲು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಹಾಗೂ ರಾಜ್ಯ ವಲಯದಿಂದ 2008-09 ರಿಂದ ಇದುವರೆಗೂ ಒಟ್ಟು ರೂ 1356.36 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.<br><br>ಸದರಿ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್ ಮಣ್ಣಿನ 400 ಮೀಟರ್ ರನ್ನಿಂಗ್ ಟ್ರ್ಯಾಕ್, ವಾಲಿಬಾಲ್, ಖೋ-ಖೋ, ಥ್ರೋಬಾಲ್, ಕಬಡ್ಡಿ, ಫುಟ್‌ಬಾಲ್ ಅಂಕಣಗಳಿದ್ದು, ಟೇಬಲ್ ಟೆನ್ನಿಸ್ ಎರಡು ಹಾಲ್‌ಗಳು, ಲಾನ್ ಟೆನ್ನಿಸ್ ಹಾಲ್, ಈಜುಕೊಳ, ರಸ್ತೆ ಮತ್ತು ಒಳಚರಂಡಿ ವ್ಯವಸ್ಥೆ ಹಾಗೂ ನೀರು ಮತ್ತು ವಿದ್ಯುತ್ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ. |
| ಇ) | ಯಾದಗಿರಿ ಜಿಲ್ಲೆಯಲ್ಲಿರುವ ಕ್ರೀಡಾ ವಸತಿ ಶಾಲಾ ಮಕ್ಕಳಿಗೆ ಊಟ ಉಪಹಾರ ಸೇರಿದಂತೆ ಯಾವುದೇ ಸೌಲಭ್ಯಗಳು ಸಕಾಲದಲ್ಲಿ ಸಿಗುತ್ತಿಲ್ಲದಿರುವುದರ ಬಗ್ಗೆ, ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು) | ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಯಾದಗಿರಿ ಜಿಲ್ಲೆಯಲ್ಲಿ ಕ್ರೀಡಾ ವಸತಿ ನಿಲಯವನ್ನು ಪ್ರಾರಂಭಿಸಲಾಗಿದ್ದು, ಅಥ್ಲೆಟಿಕ್ಸ್ ಮತ್ತು ವಾಲಿಬಾಲ್ ಕ್ರೀಡೆಯಲ್ಲಿ ಒಟ್ಟು 50 ಕ್ರೀಡಾಪಟುಗಳು ಕ್ರೀಡಾ ತರಬೇತಿಯನ್ನು ಪಡೆಯುತ್ತಿದ್ದಾರೆ.<br><br>ಯಾದಗಿರಿ ಜಿಲ್ಲೆಯಲ್ಲಿರುವ ಕ್ರೀಡಾ ವಸತಿ ನಿಲಯದ ಕ್ರೀಡಾಪಟುಗಳಿಗೆ ಅಗತ್ಯ ಸಾಮಗ್ರಿಗಳಾದ ಕಬೋರ್ಡ್-15, ಹಾಸಿಗೆ, ಹೊದಿಕೆ, ದಿಂಬು, ಕವರ್-50, ಡೈನಿಂಗ್ ಟೇಬಲ್-10, ಸಿಂಗಲ್ ಕಾಟ್-21 ಗಳನ್ನು ಜನವರಿ-2026ರಲ್ಲಿ ಒದಗಿಸಲಾಗಿದೆ. ಅಲ್ಲದೇ, ಊಟೋಪಹಾರ ಸೇರಿದಂತೆ ಕ್ರೀಡಾ ಸಮವಸ್ತ್ರ, ವಾರ್ಮ್ ಅಪ್ ಶೂಸ್, ಕಲರ್ಸ್, ಪ್ರಯಾಣ ಭತ್ಯೆ/ದಿನಭತ್ಯೆ, ಉಚಿತ ವೈದ್ಯಕೀಯ ಸೌಲಭ್ಯ, ಮನೆಪಾಠ ಅಗತ್ಯ ಸೌಲಭ್ಯಗಳನ್ನು ಸಕಾಲದಲ್ಲಿ ಒದಗಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ:-ವೈಎಸ್‌ಡಿ-ಇಬಿಬಿ/24/2026

(ಸಿದ್ದರಾಮಯ್ಯ)
ಮುಖ್ಯಮಂತ್ರಿ